ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 17-04-2016

## ಉಪನ್ಯಾಸಕರುಗಳು ಮೌಲ್ಯಮಾಪನಕ್ಕೆ ಹಾಜರಾಗದಿದ್ದರೆ

## ಖಾಸಗಿಯವರಿಂದ ಮೌಲ್ಯಮಾಪನ : ಶ್ರೀ ಕಿಮ್ಮನೆ ರತ್ನಾಕರ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ): ಪದವಿಪೂರ್ವ ಪ್ರಾಂಶುಪಾಲರು/ಉಪನ್ಯಾಸಕರುಗಳು ಮೌಲ್ಯಮಾಪನಕ್ಕೆ ಹಾಜರಾಗದಿದ್ದರೆ, ನಿಯಮಾನುಸಾರ ಅರ್ಹತೆ ಇರುವ ಖಾಸಗಿಯವರಿಂದ ಮೌಲ್ಯಮಾಪನ ನಡೆಸಲಾಗುವುದು ಎಂದು ಶಿಕ್ಷಣ ಸಚಿವ ಶ್ರೀ ಕಿಮ್ಮನೆ ರತ್ನಾಕರ ತಿಳಿಸಿದರು.

ಅವರು ಇಂದು ದ್ವಿತೀಯ ಪಿಯುಸಿ ಮೌಲ್ಯಮಾಪನ ಕುರಿತು ಬೆಂಗಳೂರಿನ ಸರ್ವ ಶಿಕ್ಷಣ ಅಭಿಯಾನ ಕಚೇರಿಯಲ್ಲಿ ಏರ್ಪಡಿಸಿದ್ದ ಪತ್ರಿಕಾ ಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.

ಆರು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆದಿದ್ದು, ವಿದ್ಯಾರ್ಥಿಗಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಉಪನ್ಯಾಸಕರುಗಳು ತಮ್ಮ ಮುಷ್ಕರವನ್ನು ಹಿಂಪಡೆದು ಮೌಲ್ಯಮಾಪನಕ್ಕೆ ಹಾಜರಾಗಬೇಕೆಂದರು.

ಬೇಡಿಕೆಗೆ ಸ್ಪಂದಿಸಿ ಏಪ್ರಿಲ್ 15,2016 ರಲ್ಲಿ ಪದವಿಪೂರ್ವ ಪ್ರಾಂಶುಪಾಲರು/ಉಪನ್ಯಾಸಕರುಗಳಿಗೆ ಹಾಗೂ ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಗೆ, ಸಹಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿದೆ. ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಸಿಕ ರೂ.1000/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಿದೆ. ಇದರ ಜೊತೆಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ಮತ್ತು ಪ್ರೌಢಶಾಲಾ ಶಿಕ್ಷಕರುಗಳಿಗೆ ನೀಡುತ್ತಿರುವ ರೂ.500 ಮತ್ತು 400/- ಗಳ ವಿಶೇಷ ಭತ್ಯೆಯನ್ನು ಮುಂದುವರಿಸಲಾಗಿದೆ.

ಸರ್ಕಾರವು ರಾಜ್ಯದಲ್ಲಿ ಬರಪೀಡಿತ ಜನರ ಮತ್ತು ಬರಪರಿಹಾರ, ಕುಡಿಯುವ ನೀರಿನ ಮತ್ತು ಮೂಲಭೂತ ಸೌಲಭ್ಯಗಳ ಅವಶ್ಯಕತೆಗಳ ನಡುವೆಯು ಮೇಲಿನ ಸೌಲಭ್ಯಗಳನ್ನ ಕಲ್ಪಿಸಿದೆ. ಇದನ್ನು ಗಮನದಲ್ಲಿರಿಸಿಕೊಂಡು ಮೌಲ್ಯಮಾಪನಕ್ಕೆ ಹಾಜರಾಗಬೇಕು.

ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸದೆ ಮುಷ್ಕರದಲ್ಲಿ ಮುಂದುವರೆಯುವ ಪ್ರಾಂಶುಪಾಲರು ಮತ್ತು ಉಪನ್ಯಾಸಕರುಗಳಿಗೆ ಶಿಕ್ಷಣ ಕಾಯ್ದೆ ಅನ್ವಯ ಕ್ರಮ ಕೈಗೊಳ್ಳಲಾಗುವುದು. ಮೌಲ್ಯಮಾಪನಕ್ಕೆ ಹಾಜರಾಗುವವರಿಗೆ ಬೆದರಿಕೆ ಹಾಕಿದರೆ ಅಂತಹವರ ವಿರುದ್ಧ ಸಹ ಕಠಿಣ ಕ್ರಮಕೈಗೊಳ್ಳಲಾಗುವುದು ಎಂದರು.

ಪೋಷಕರು ಮತ್ತು ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಆತಂಕಕ್ಕೊಳಗಾಗಬಾರದು. ವಿದ್ಯಾರ್ಥಿಗಳ ಹಿತಾಶಕ್ತಿಯನ್ನು ಗಮನದಲ್ಲಿಟ್ಟುಕೊಂಡು ಸಿಇಟಿ ಗಿಂತ ಮುಂಚೆಯೆ ಫಲಿತಾಂಶ

ನೀಡಲಾಗುವುದು. ಯಾವ ಆತಂಕವನ್ನು ಇಟ್ಟುಕೊಳ್ಳದೆ ಸಿಇಟಿ ಪರೀಕ್ಷೆಗೆ ತಯಾರಾಗುವಂತೆ ವಿದ್ಯಾರ್ಥಿಗಳಿಗೆ ಸಚಿವರು ಕರೆ ನೀಡಿದ್ದಾರೆ.

ಪತ್ರಿಕಾ ಗೋಷ್ಠಿಯಲ್ಲಿ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ನಿರ್ದೇಶಕರು ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

----